# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ಕಾರ್ಯಾಲಯ, ನಂಜನಗೂಡು

**ಓ ಎಸ್ ನಂ.293-2014** **ಪಿ . ಡಬ್ಲ್ಯುಃ 1**

| | |
|---|---|
| ಸಾಕ್ಷಿದಾರರ ಹೆಸರು<br>ತಂದೆಯ/ಗಂಡನ ಹೆಸರು<br>ವಯಸ್ಸು<br>ಉದ್ಯೋಗ<br>ವಾಸ್ತವ್ಯ | ಸುಬ್ರಮಣ್ಯಂ ಸಿ ವಿ<br>ಲೇಟ್ ಕೆ ಆರ್ ವಿಶ್ವೇಶ್ವರಯ್ಯ<br>68 ವರ್ಷ<br>ನಿವೃತ್ತ ನೌಕರ<br>ಬೆಂಗಳೂರು |
| | **ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ** 02-08-2021. |

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಾದ ಶ್ರೀ ಎಂ.ಆರ್ ರವರಿಂದಃ-**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿದ್ದು ಅದನ್ನು ನಾನೇ ಹೇಳಿ ಬರೆಯಿಸಿ ಸಹಿ ಮಾಡಿರುತ್ತೇನೆ.

ದಾವಾ ಸ್ವತ್ತುಗಳಿಗೆ ಸಂಬಂಧಪಟ್ಟಂತೆ 2013-14 ನೇ ಇಸವಿಯ 2 ಆರ್.ಟಿ.ಸಿ ಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ನಿಪಿ-1 ಮತ್ತು 2 ಎಂದು, ದಿ.31-01-1992 ರ ನೋಂದಾಯಿತ ಕ್ರಯಪತ್ರವನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-3 ಎಂದು, ದಿ.10-02-2014 ರ ಕಂದಾಯ ರಶೀದಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-4 ಎಂದು, ಪಟ್ಟಾ ಪುಸ್ತಕವನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-5 ಎಂದು, ದಾವಾ ಸ್ವತ್ತಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-6 ಎಂದು, ಗ್ರಾಮಾಂತರ ಪೊಲೀಸ್ ಠಾಣೆ ಇವರು ನೀಡಿರುವ ಹಿಂಬರಹವನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-7 ಎಂದು, ವಾದಿ ನನಗೆ

ಬರೆದುಕೊಟ್ಟ ಸಾಮಾನ್ಯ ಅಧಿಕಾರ ಪತ್ರವನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ–8 ಎಂದು ಗುರುತಿಸಲಾಯಿತು.

(ಮುಂದುವರಿದ ಮುಖ್ಯ ವಿಚಾರಣೆಗೆ ವಕೀಲರು ಸಮಯಾವಕಾಶವನ್ನು ಕೇಳಿರುವುದರಿಂದ ಸಮಯಾವಕಾಶವನ್ನು ನೀಡಲಾಯಿತು)

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**2 ನೇ ಪ್ರ.ದ. ನ್ಯಾ ದಂ. ನಂಜನಗೂಡು**